ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 1595/2020

ಚಾಸಾ: 2 ಪ್ರಾಸಾ:2

ದಿನಾಂಕ: 19/08/2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಶ್ರೀಧರ ಆಚಾರಿ |
| ತಂದೆಯ ಹೆಸರು | : | ವೆಂಕಟ್ರಮಣ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಮರದ ಕೆಲಸ |
| ವಾಸ ಸ್ಥಳ | : | ಸೌಡ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ದಿನಾಂಕ 17/08/2019 ರ ಪಂಚನಾಮೆಯ ದಾಖಲೆಯನ್ನು ತೋರಿಸಿದ ಮೇರೆಗೆ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ.4 ಎಂದು, ಸಾಕ್ಷಿಯ ಸಹಿಯನ್ನು ನಿಪಿ.4(ಎ) ಎಂದು ಗುರುತಿಸಲಾಯಿತು. ನಾನು ಚಾಸ.1ರವರ ಮನೆಯಲ್ಲಿ ಕೆಲಸಕ್ಕೆ ಹೋಗಿದ್ದಾಗ ಪೊಲೀಸರು ದನ ಕಳುವಾದ ಬಗ್ಗೆ ವಿಚಾರಿಸಲಾಗಿ, ನನ್ನ ಸಹಿ ಪಡೆದಿರುತ್ತಾರೆ. ನ್ಯಾಯಾಲಯದ ಮುಂದಿರುವ ಆರೋಪಿತರ ಪರಿಚಯ ಇರುವುದಿಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಈಗ ಸುಮಾರು ಆರು ವರ್ಷಗಳ ಹಿಂದೆ ಸದ್ರಿ ಸಹಿ ಮಾಡಿರುತ್ತೇನೆ, ಆದರೆ ದಿನಾಂಕ ನೆನಪಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ</u>**

ಸಾಕ್ಷಿಗೆ ದಿನಾಂಕ 17.11.2019 ರ ಹೇಳಿಕೆಯನ್ನು ಓದಿ ತಿಳಿಸಿದ್ದು, ಅದನ್ನು ಆತ ಒಪ್ಪಿರುವುದಿಲ್ಲ. ಸದ್ರಿ ಹೇಳಿಕೆಯನ್ನು ನಿಪಿ.5 ಎಂದು ಗುರುತಿಸಲಾಯಿತು. ಸದ್ರಿ ಕ್ರಮ ಜರಗಿಸುವಾಗ 1 ಮತ್ತು 2ನೇ ಆರೋಪಿತರು ಹಾಜರಿದ್ದು, ಮಧ್ಯಾಹ್ನ 3 ರಿಂದ 4 ವೇಳೆಗೆ ಪಂಚನಾಮೆ ಜರುಗಿಸಿ, ನಿಪಿ.4ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸಾಕ್ಷಿ ನನ್ನನ್ನು ಹಾಡಿಗೆ ಕರೆದುಕೊಂಡು ಹೋಗಿ ಪೊಲೀಸರು ಸಹಿ ಪಡೆದರು, ಆದರೆ ಆರೋಪಿತರು ಇರಲಿಲ್ಲ ಎಂದು ನುಡಿದಿರುತ್ತಾರೆ. ಸದ್ರಿ ದಾಖಲೆಯಲ್ಲಿ ಎನು ಬರೆದಿದೆ ಎಂದು ನನಗೆ ತಿಳಿದಿಲ್ಲ. ಈ ವಿಚಾರವಾಗಿ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರನ್ನು ಈ ಹಿಂದೆ ಮೇಲೆ ಹೇಳಿದ ಸ್ಥಳದಲ್ಲಿ ನೋಡಿದರೂ ಅವರಿಗೆ ಸಹಾಯ ಮಾಡಲು ಇಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಮ್ ಡಿ ಎಸ್ ರವರಿಂದಃ</u>**

ಮೇಲೆ ಹೇಳಿದ ಸಹಿಯನ್ನು ಕೋಟ ಪೊಲೀಸ್ ಠಾಣೆಯಲ್ಲಿ ಎಂದರೆ ಸರಿಯಲ್ಲ. ಅದು ಖಾಲಿ ಪೇಪರ್ ಆಗಿತ್ತು ಎಂದರೆ ನಾನುನೋಡಿಲ್ಲ. ನನ್ನ ಸಮಕ್ಷಮ ಬೇರೆ ಯಾರೂ ಆ ದಾಖಲೆಗೆ ಸಹಿ ಮಾಡಿಲ್ಲ ಎಂದರೆ ನನಗೆ ಗೊತ್ತಿಲ್ಲ. ಯಾವ ಉದ್ದೇಶಕ್ಕಾಗಿ ಸಹಿ ಪಡೆದರು ಎಂದರೆ ನನಗೆ ತಿಳಿದಿಲ್ಲ.

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**